

# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 310 | Pages. 2 | Date: 04-11-2025, TUESDAY | RNI NO: KARKAN/2024/89601 | Kannada Daily

ಸಂಪುಟ : 01 – ಸಂಚಿಕೆ : 310 – ಪುಟಗಳು : 2 | 04-11-2025 ಮಂಗಳವಾರ | Ph: 8762954248 | ದರ : ₹1

# ಸಮರ್ಪಕ ವಿದ್ಯುತ್ ಪೂರೈಕೆಗೆ ಕ್ರಮ: ಕೆ.ಜೆ. ಜಾರ್ಜ್

## ರಾಜ್ಯಾದ್ಯಂತ 100 ಸಬ್‌ಸ್ಟೇಷನ್ | ವಿದ್ಯುತ್ ವಿತರಣಾ ಕೇಂದ್ರ ಲೋಕಾರ್ಪಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಸಮರ್ಪಕ ವಿದ್ಯುತ್ ಪೂರೈಕೆಗೆ ರಾಜ್ಯದಲ್ಲಿ 100 ಸಬ್ ಸ್ಟೇಷನ್ ನಿರ್ಮಾಣ ಮಾಡಲಾಗುತ್ತಿದ್ದು, ಸೂಕ್ತ ಜಾಗ ನೀಡಿದರೆ ಇನ್ನಷ್ಟು ಸಬ್‌ಸ್ಟೇಷನ್‌ಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಹೇಳಿದರು.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಅರಸೀಕೆರೆ ತಾಲೂಕಿನ ಸೂಳೆಕೆರೆ (ಅಗ್ಗುಂದ) ಗ್ರಾಮದಲ್ಲಿ ನಿರ್ಮಿಸಿರುವ 110/11ಕೆ.ವಿ. ವಿದ್ಯುತ್ ವಿತರಣಾ ಕೇಂದ್ರವನ್ನು ಸೋಮವಾರ ಉದ್ಘಾಟಿಸಿ ಮಾತನಾಡಿ, ರಾಜ್ಯದಲ್ಲಿ ಸಾಕಷ್ಟು ವಿದ್ಯುತ್ ಲಭ್ಯವಿದೆ. ಅದನ್ನು ಸಮರ್ಪಕವಾಗಿ ಪೂರೈಸಲು ಸಬ್ ಸ್ಟೇಷನ್‌ಗಳ ನಿರ್ಮಾಣಕ್ಕೆ ಮುಂದಾಗಿರುವ ಸರ್ಕಾರ ಈಗಾಗಲೇ 100 ಸಬ್ ಸ್ಟೇಷನ್‌ಗಳ ನಿರ್ಮಾಣಕ್ಕೆ ಕ್ರಮವಹಿಸಿದೆ. ಇನ್ನಷ್ಟು ಸಬ್‌ಸ್ಟೇಷನ್‌ಗಳು ಬೇಕು ಎಂಬ ಬೇಡಿಕೆ ಇದ್ದು, ಜಾಗದ ಕೊರತೆ ಇದೆ. ಸೂಕ್ತ ಜಾಗ ನೀಡಿದರೆ ಬೇಡಿಕೆಗೆ ತಕ್ಕಂತೆ ಸಬ್‌ಸ್ಟೇಷನ್‌ಗಳನ್ನು ಸ್ಥಾಪಿಸಲಾಗುವುದು ಎಂದು ತಿಳಿಸಿದರು.

ಕೃಷಿ ಪಂಪ್ ಸೆಟ್‌ಗಳಿಗೆ ಹಗಲು ವೇಳೆ ಸತತ 7 ಗಂಟೆ ವಿದ್ಯುತ್ ಪೂರೈಸುವ ಉದ್ದೇಶದಿಂದ ಕುಸುಮ್- ಸಿ ಯೋಜನೆಯಡಿ ಕೃಷಿ ಫೀಡರ್‌ಗಳ ಸೌರೀಕರಣ ಮಾಡಲಾಗುತ್ತಿದೆ. ಈ ಯೋಜನೆಯಡಿ ಈಗಾಗಲೇ ರಾಜ್ಯದಲ್ಲಿ 2,400 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಗೆ ಕ್ರಮ ವಹಿಸಲಾಗಿದೆ. ಇದಕ್ಕಾಗಿ ಖಾಸಗಿಯವರು 10 ಸಾವಿರ ಕೋಟಿ ರೂ. ಹೂಡಿಕೆ ಮಾಡುತ್ತಿದ್ದಾರೆ. ಈ ಯೋಜನೆ ಪೂರ್ಣಗೊಂಡರೆ ಕೃಷಿ ಪಂಪ್‌ಸೆಟ್‌ಗಳ ವಿದ್ಯುತ್ ಸಮಸ್ಯೆ ಬಹುತೇಕ ಬಗೆಹರಿಯಲಿದೆ ಎಂದು ಹೇಳಿದರು.

ನಿರಂತರ ಜ್ಯೋತಿ ಯೋಜನೆಯಡಿ ಗೃಹ ಬಳಕೆಗೆ ನಿರಂತರ ಸಿಂಗಲ್ ಫೇಸ್ ವಿದ್ಯುತ್ ಪೂರೈಕೆ ಮಾಡುವ ನಿಟ್ಟಿನಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈ ಕುರಿತು ಯಾವುದೇ ಸಮಸ್ಯೆ ಇದ್ದರೆ ಅದನ್ನು ತ್ವರಿತವಾಗಿ



ಬಗೆಹರಿಸಲಾಗುವುದು. ವಿದ್ಯುತ್ ಪೂರೈಕೆ ವಿಚಾರಲ್ಲಿ ಲೋಪವಾಗದಂತೆ ನೋಡಿಕೊಳ್ಳುವ ಉದ್ದೇಶದಿಂದಲೇ ಮೂಲ ಸೌಕರ್ಯ ಹೆಚ್ಚಿಸಲು ನಮ್ಮ ಸರ್ಕಾರ ಆದ್ಯತೆ ನೀಡಿದೆ ಎಂದರು.

### ಅಕ್ರಮ ಸಕ್ರಮಕ್ಕೆ ಆದ್ಯತೆ

ಈಗಾಗಲೇ ಅಕ್ರಮ-ಸಕ್ರಮ ಯೋಜನೆ ಮೂಲಕ ರೈತರ ಪಂಪ್ ಸೆಟ್‌ಗಳಿಗೆ ಪಡೆದಿದ್ದ ಅಕ್ರಮ ಸಂಪರ್ಕಗಳನ್ನು ಸಕ್ರಮಗೊಳಿಸಲಾಗುತ್ತಿದೆ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗ ಅಕ್ರಮ-ಸಕ್ರಮ ಯೋಜನೆಯಲ್ಲಿ 4.5 ಲಕ್ಷ ಅರ್ಜಿಗಳು ಬಾಕಿ ಉಳಿದಿತ್ತು. ಈ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡಲು ಸಚಿವ ಸಂಪುಟದಲ್ಲಿ ಚರ್ಚಿಸಿ ಸಕ್ರಮಗೊಳಿಸಲು ಕ್ರಮ ವಹಿಸಲಾಗಿದ್ದು, ಈಗಾಗಲೇ 3 ಲಕ್ಷಕ್ಕೂ ಹೆಚ್ಚು ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ ಎಂದು ತಿಳಿಸಿದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಕೃಷಿಕರ ಅಭಿವೃದ್ಧಿಗಾಗಿ ಉತ್ತಮ ಯೋಜನೆಗಳನ್ನು ರೂಪಿಸಿ ಉಚಿತ ವಿದ್ಯುತ್ ಪೂರೈಕೆ ಮಾಡುತ್ತಿರುವುದು ಹೆಮ್ಮೆಯ ವಿಷಯ. ಗೃಹ ಜ್ಯೋತಿ ಯೋಜನೆಯಡಿ ಸಾರ್ವಜನಿಕರಿಗೆ ಉಚಿತ ವಿದ್ಯುತ್ ಸೌಲಭ್ಯ ಒದಗಿಸಲಾಗುತ್ತಿದೆ ಎಂದರು.

### ಸೋಲಾರ್ ಪಾರ್ಕ್ ಸ್ಥಳ ಪರಿಶೀಲನೆ

ತಾಲೂಕಿನ ಸಂಕೋಡನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿದ ಇಂಧನ ಸಚಿವ ಕೆ.ಜೆ. ಜಾರ್ಜ್, ಕುಸುಮ್- ಸಿ ಯೋಜನೆಯಡಿ ಗ್ರಾಮದ 25 ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗುತ್ತಿರುವ ಸೋಲಾರ್ ಪಾರ್ಕ್ ಪರಿಶೀಲನೆ ನಡೆಸಿದರು.

ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಹಗಲಿನ ವೇಳೆ ವಿದ್ಯುತ್ ನೀಡಬೇಕೆಂಬ ಉದ್ದೇಶದಿಂದ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಕುಸುಮ್-ಸಿ ಯೋಜನೆ ಬಗ್ಗೆ ರೈತರು ಮೆಚ್ಚುಗೆ ವ್ಯಕ್ತಪಡಿಸಿದ್ದು, ತ್ವರಿತವಾಗಿ ಪೂರ್ಣಗೊಳಿಸಬೇಕು. ಗುತ್ತಿಗೆದಾರರು ಸರಿಯಾದ ಸಮಯದಲ್ಲಿ ಕೆಲಸ ಆರಂಭಿಸದಿದ್ದರೆ ಅವರಿಗೆ ನೋಟಿಸ್ ನೀಡಿ, ಟೆಂಡರ್ ರದ್ದುಪಡಿಸಿ, ಹೊಸ ಟೆಂಡರ್ ಕರೆದು ಬೇರೆಯವರಿಗೆ ನೀಡುವಂತೆ ಸೆಸ್ಕ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಶಾಸಕ ಕೆ.ಎಂ. ಶಿವಲಿಂಗೇಗೌಡ ಮಾತನಾಡಿ, ಅರಸೀಕೆರೆ ಬರಡು ಭೂಮಿ ಎಂದು ಹೇಳಲಾಗುತ್ತಿತ್ತು. ಹಲವು ಯೋಜನೆಗಳ ಮೂಲಕ ತಾಲೂಕಿನ ನೀರಿನ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲಾಗಿದೆ. ಇದೀಗ ರೈತರಿಗೆ ಉತ್ತಮ ವಿದ್ಯುತ್ ಸೌಲಭ್ಯ ನೀಡಬೇಕಿದ್ದು, ಅರಸೀಕೆರೆಗೆ 100 ಮೆಗಾವ್ಯಾಟ್ ವಿದ್ಯುತ್ ಬೇಕಾಗಿದೆ. ಸದ್ಯ ನಮಗೆ ಅರ್ಧದಷ್ಟು ಮಾತ್ರ ಸಿಗುತ್ತಿದೆ. ರೈತರ ಈ ಬವಣೆಯನ್ನು ಹೋಗಲಾಡಿಸಲು ಕುಸುಮ್-ಸಿ ಯೋಜನೆ ಉಪಯುಕ್ತವಾಗಿದೆ. ಇದರ ಜತೆಗೆ ಕಾಡಂಚಿನ ಗ್ರಾಮಗಳಲ್ಲಿ ವಿದ್ಯುತ್ ಸಮಸ್ಯೆ ಕಾರಣ ರಾತ್ರಿ ವೇಳೆಯಲ್ಲಿ ಕಾಡು ಪ್ರಾಣಿಗಳ ಹಾವಳಿ ಇದೆ. ಈ ಕಾರಣದಿಂದಾಗಿ ನಿರಂತರ ಜ್ಯೋತಿ ಮೂಲಕ ಈ ಸಮಸ್ಯೆ ಬಗೆಹರಿಸಲು ಕ್ರಮವಹಿಸ ಬೇಕಿದೆ. ಅಲ್ಲದೇ ತಾಲೂಕು ವ್ಯಾಪ್ತಿಯಲ್ಲಿ ಇನ್ನಷ್ಟು ಸಬ್ ಸ್ಟೇಷನ್‌ಗಳನ್ನು ಆರಂಭಿಸಿ ರೈತರ ವಿದ್ಯುತ್ ಸಮಸ್ಯೆಯನ್ನು ಹೋಗಲಾಡಿಸಬೇಕು ಎಂದು ಇಂಧನ ಸಚಿವರಿಗೆ ಮನವಿ ಸಲ್ಲಿಸಿದರು.

### 25 ಗ್ರಾಮಗಳಿಗೆ ಬೆಳಕು

ಕ.ವಿ.ಪ್ರ.ನಿ.ನಿ ಮುಖ್ಯ ಇಂಜಿನಿಯರ್ ಸತೀಶ್ ಚಂದ್ರ ಮಾತನಾಡಿ, ಸದರಿ ವಿದ್ಯುತ್ ಕೇಂದ್ರದಿಂದ 4.42 ಮೆಗಾ ವ್ಯಾಟ್ ವಿದ್ಯುತ್ ವರ್ಗಾವಣೆ ಮಾಡಲಾಗುವುದು. ಸಮರ್ಪಕವಾಗಿ ಕರ್ತವ್ಯ ನಿರ್ವಹಿಸುವುದರ ಮೂಲಕ ಸ 25 ಗ್ರಾಮಗಳಿಗೆ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡಲಾಗುವುದು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಗ್ಯಾರಂಟಿ ಯೋಜನೆಗಳ ತಾಲ್ಲೂಕು ಅಧ್ಯಕ್ಷ ಧರ್ಮಶೇಖರ್, ಅಗ್ಗುಂದ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕವಿತ, ದುಮ್ಮೇನಹಳ್ಳಿ ಗ್ರಾಪಂ ಅಧ್ಯಕ್ಷ ಎ.ಎಂ. ಅಜ್ಜಯ್ಯ, ಕ.ವಿ.ಪ್ರ.ನಿ.ನಿ ಅಧೀಕ್ಷಕ ಮಹೇಶ್, ಕಾರ್ಯಪಾಲಕ ಅಭಿಯಂತರ ಶಿವಾನಂದ, ಸೆಸ್ಕ್ ತಾಂತ್ರಿಕ ನಿರ್ದೇಶಕ ಡಿ.ಜೆ. ದಿವಾಕರ್ ಮತ್ತಿತರರು ಹಾಜರಿದ್ದರು.

# ಕೆಎಂಶಿಗೆ ಸಚಿವ ಸ್ಥಾನ ಹೈಕಮಾಂಡ್ ನಿರ್ಧರಿಸುತ್ತೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಸಚಿವ ಸ್ಥಾನದ ಆಕಾಂಕ್ಷಿ ಅಲ್ಲ, ಅವರು ನಮ್ಮ ನಾಯಕರು. ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡುವ ಕುರಿತು ಹೈಕಮಾಂಡ್ ತೀರ್ಮಾನಿಸುತ್ತದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಹೇಳಿದರು.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿ, ಶಿವಲಿಂಗೇಗೌಡ ಸೋಲಿಲ್ಲದ ಸರದಾರರಾಗಿದ್ದಾರೆ. ಅವರಿಗೆ ಸಚಿವ ಸ್ಥಾನ ಕೊಡಬೇಕೇ ಅಥವಾ ಬೇಡವೇ ಎಂಬುದು ಸಿಎಂ, ಕೆಪಿಸಿಸಿ ಮತ್ತು ಹೈಕಮಾಂಡ್ ತೀರ್ಮಾನಿಸುವ ವಿಷಯ ಎಂದು ಸ್ಪಷ್ಟಪಡಿಸಿದರು.

ಸಿಎಂ ಬದಲಾವಣೆ ವಿಚಾರಕ್ಕೆ ಪ್ರತಿಕ್ರಿಯಿಸಿ, ನ್ಯೂಸ್ ಮಾಡೋದು ನಿಮ್ಮ ಹಕ್ಕು. ಆದರೆ ಹೈಕಮಾಂಡ್‌ನಿಂದ ಯಾವುದೇ ಸೂಚನೆ ಬಂದಿದೆಯಾ. ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಅಥವಾ ಸೋನಿಯಾ ಗಾಂಧಿ ಏನಾದರೂ ಹೇಳಿದ್ದಾರೆಯೇ. ಹೈಕಮಾಂಡ್ ಹೇಳಿದ ನಂತರವೇ ನಾವು ಮಾತನಾಡಬಹುದು ಎಂದು ಹೇಳಿದರು.

ಸಿದ್ದರಾಮಯ್ಯ ಎಂದೂ ನಾನೆ ಸಿಎಂ ಆಗ್ತೇನೆ ಎಂದು ಹೇಳಿಲ್ಲ. ನಮ್ಮಲ್ಲಿ ಒಂದು ವ್ಯವಸ್ಥೆ ಇದೆ ಸಿಎಲ್‌ಪಿ ಸಭೆ ಕರೆಯಲಾಗುತ್ತದೆ, ಹೈಕಮಾಂಡ್ ವೀಕ್ಷಕರನ್ನು ಕಳುಹಿಸುತ್ತದೆ, ಬಳಿಕ ನಿರ್ಧಾರವಾಗುತ್ತದೆ. ಅದೇ ಪ್ರಕ್ರಿಯೆ ಈಗಲೂ ಇದೆ ಎಂದರು.

### ಬಿಜೆಪಿ ವಿರುದ್ಧ ಗುಟುರು

ಬೆಂಗಳೂರು ನಗರದಲ್ಲಿ ಟನಲ್ ನಿರ್ಮಾಣ ಯೋಜನೆಗೆ ಬಿಜೆಪಿ ವಿರೋಧ ವ್ಯಕ್ತಪಡಿಸಿರುವ ಕುರಿತು ಮಾತನಾಡಿದ ಸಚಿವರು, ಬಿಜೆಪಿಯವರು ಹಿಂದೆ ಸ್ಟೀಲ್ ಬ್ರಿಡ್ಜ್ ಯೋಜನೆಗೂ ವಿರೋಧಿಸಿದ್ದರು. ಶಿವಾನಂದ ಸರ್ಕಲ್‌ನ ಸೇತುವೆಯೂ ಸ್ಟೀಲ್‌ನಿಂದ ನಿರ್ಮಾಣವಾಗಿದೆ. ಸ್ಟೀಲ್ ಇಲ್ಲದೆ ಯಾವ ಯೋಜನೆಯೂ ಸಾಧ್ಯವಿಲ್ಲ. ಬಿಜೆಪಿಯ ಕೆಲವರಿಗೆ ಒಳ್ಳೆಯ ಕೆಲಸ ಸಹಿಸಲು ಆಗುವುದೇ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವರ್ಷ ಮಳೆ ಹೆಚ್ಚಾಗಿ ಬೆಂಗಳೂರು ಸೇರಿ ರಾಜ್ಯದ ರಸ್ತೆಗಳಲ್ಲಿ ಗುಂಡಿಗಳು ಉಂಟಾಗಿವೆ. ಸರಿಪಡಿಸಲು ಸರ್ಕಾರ ಹಣ ಬಿಡುಗಡೆ ಮಾಡಿದೆ. ಕಾಂಕ್ರೀಟ್ ರಸ್ತೆಗಳಿರುವ ಕಡೆ ಗುಂಡಿಗಳ ಸಮಸ್ಯೆ ಕಾಣಿಸಿಕೊಂಡಿಲ್ಲ ಎಂದರು. ಜಪಾನ್‌ನಲ್ಲಿ ನಾಲ್ಕು ದಶಕಗಳ ಹಿಂದೆ ಸಮುದ್ರದಡಿ ಟನಲ್ ನಿರ್ಮಾಣ ಮಾಡಲಾಗಿದೆ. ಪ್ಯಾರಿಸ್ ಹಾಗೂ ಲಂಡನ್ ನಡುವೆಯೂ ಟನಲ್ ಇದೆ. ನಮ್ಮ ಮೆಟ್ರೋ ಯೋಜನೆಯಲ್ಲೂ ಟನಲ್ ನಿರ್ಮಾಣ ನಡೆದಿದೆ. ಅಲ್ಲಿ ಕೆರೆಗಳು ಬತ್ತಿಲ್ಲ ಎಂದು ಉದಾಹರಿಸಿದರು.

# ಪೊಲೀಸ್ ಠಾಣೆ ಸ್ತ್ರೀಯರಿಗೆ ತವರಿಗಿಂತ ಹೆಚ್ಚು

## ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ | ವಿದ್ಯಾರ್ಥಿಗಳೊಂದಿಗೆ ಸಂವಾದ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹಿಳೆಯರಿಗೆ ಪೊಲೀಸ್ ಠಾಣೆಗಳು ತವರಿಗಿಂತ ಹೆಚ್ಚು ನೆರವಿಗೆ ಬರುತ್ತವೆ. ಯಾವುದೇ ಸಮಸ್ಯೆಯಾದರೂ ಪೊಲೀಸ್ ಠಾಣೆಗೆ ಭೇಟಿ ನೀಡಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ಸಲಹೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಜ್ಯ ಮಹಿಳಾ ಆಯೋಗ, ಪೊಲೀಸ್ ಇಲಾಖೆ ಹಾಗು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸೋಮವಾರ ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಸಭಾಂಗಣದಲ್ಲಿ ಆಯೋಜಿಸಿದ್ದ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಆರ್ಥಿಕವಾಗಿ ಸದೃಢರಾದರೆ ಮಾತ್ರ ಒಳ್ಳೆಯ ಬದುಕು ಕಟ್ಟಿಕೊಳ್ಳಲು ಸಾಧ್ಯವಿದ್ದು ಓದುವ ವಯಸ್ಸಿನಲ್ಲಿ ಬೇರೆ ಕಡೆಗೆ ಗಮನ ಹರಿಸದೆ ಗುರಿ ತಲುಪಲು ಪ್ರಯತ್ನಿಸಬೇಕು, ಹೋರಾಟದಿಂದ ಮಾತ್ರ ಜಯ ಗಳಿಸಲು ಸಾಧ್ಯ. ಹೆಣ್ಣು ಯಾವಾಗ ಆರ್ಥಿಕವಾಗಿ ಸಬಲೆಯಾಗುತ್ತಾಳೋ ಅಂದು ನಾಡು ದೇಶ ಸಬಲವಾಗುತ್ತದೆ. ಶಿಕ್ಷಣದಿಂದ ಮಾತ್ರ ಸಾಧನೆ, ಗೌರವ ಆರ್ಥಿಕ ಸಬಲೀಕರಣ, ಗುರಿ ಸಾಧಿಸಬೇಕಾದರೆ ಮೊಬೈಲ್‌ನಿಂದ ದೂರವಿರಬೇಕು ಎಂದು ಹೇಳಿದರು.

ಅಪರಿಚಿತ ವ್ಯಕ್ತಿಗಳಿಂದ ಮಹಿಳೆಯರು ತೊಂದರೆಗೆ ಸಿಲುಕಿದರೆ ಧೈರ್ಯಗೆಡದೆ ತಂದೆ-ತಾಯಿಗೆ ತಿಳಿಸಬೇಕು. ಸಮಸ್ಯೆಯಾದಾಗ ತಂದೆ ತಾಯಿಗಿಂತ ಮೊದಲು ಪೊಲೀಸರು



ಬರುತ್ತಾರೆ. ಆದ್ದರಿಂದ ಎಲ್ಲರೂ ಸಹಾಯವಾಣಿ ಸಂಖ್ಯೆಯನ್ನು ಮೊಬೈಲ್‌ನಲ್ಲಿಟ್ಟುಕೊಳ್ಳಬೇಕು ಎಂದರು.

ಅರಿವು ಪಡೆದ ಹೆಣ್ಣು ಮಕ್ಕಳು ಜ್ಞಾನದ, ಗೌರವ, ಸಾಧನೆಯ ಸಂಕೇತ ಪ್ರತಿ ಮಹಿಳೆಯರು ತಮ್ಮ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿ ಹೆಸರು, ದೂರವಾಣಿ ಸಂಖ್ಯೆಯನ್ನು ತಿಳಿದುಕೊಂಡಿರಬೇಕು. ಠಾಣೆಯಲ್ಲಿ ಸ್ಪಂದಿಸದಿದ್ದಾಗ ಪೊಲೀಸ್ ವರಿಷ್ಠಾಧಿಕಾರಿ ಹತ್ತಿರ ಹೋಗಿ ಸಮಸ್ಯೆ ಸಲ್ಲಿಸಿ ಎಂದರು.

ಜಿಲ್ಲಾಧಿಕಾರಿ ಕಚೇರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಸೇರಿ ಸರ್ಕಾರದ ಎಲ್ಲಾ ಕಚೇರಿಗಳು ತೆರದ ಮನೆಯಾಗಬೇಕು. ಇದೇ ಉದ್ದೇಶದಿಂದ ಪೊಲೀಸ್ ಠಾಣೆಯಲ್ಲಿ ತೆರೆದ ಮನೆ ಯೋಜಿತ ಕಾರ್ಯಕ್ರಮ ಪ್ರಾರಂಭವಾಗಿದೆ. ಸ್ಥಳೀಯ ಶಾಲೆಗಳಿಗೆ ಮನೆಗಳಿಗೆ ಪೊಲೀಸರು ಭೇಟಿ ನೀಡಿ ಪೊಲೀಸ್ ಠಾಣೆ ಬಗ್ಗೆ ಮಾಹಿತಿ ನೀಡುತ್ತಿದ್ದಾರೆ ಪೊಲೀಸರ ಕಂಡರೆ ಭಯಪಡದಂತೆ ಮಾಹಿತಿ ನೀಡುತ್ತಿದ್ದಾರೆಂದರು.

ಗ್ರಾಮಗಳಲ್ಲಿ ರಸ್ತೆ, ನೀರು, ಚರಂಡಿ ಇತರೆ ಸಮಸ್ಯೆಗಳಿದ್ದರೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಿಕೊಳ್ಳಬೇಕು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಮಸ್ಯೆಯನ್ನು ಆಲಿಸದಿದ್ದರೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ದೂರು ನೀಡಬೇಕೆಂದು ತಿಳಿಸಿದರು.

ಸತ್ಯಾಸತ್ಯತೆ ಅರಿಯದೆ ಯಾವುದನ್ನೂ ಒಪ್ಪಬಾರದು. ವದಂತಿಗಳಿಗೆ ಕಿವಿಕೊಡಬಾರದು. ಹಿರಿಯರಿಗೆ ಗೌರವಿಸಬೇಕು.

> ಹೆಣ್ಣು ಮಕ್ಕಳು ಮಾತೃತ್ವ ನಾಯಕಿ, ರಾಜಕೀಯ ನಾಯಕತ್ವ ಮಹತ್ವ ಹೊಂದಿದ್ದಾಳೆ. ವಿದ್ಯೆ ಜೊತೆಗೆ ವಿನಯವನ್ನು ರೂಢಿಸಿಕೊಂಡು ಒಳ್ಳೆಯ ಪ್ರಜೆಗಳಾಗಬೇಕು. ಉತ್ತಮ ವ್ಯಾಸಂಗದ ಮೂಲಕ ಅಧಿಕಾರಿ, ಜನಪ್ರತಿನಿಧಿಯಾಗಿ ಬೆಳೆಯಬೇಕು.
>
> – ನಾಗಲಕ್ಷ್ಮಿ ಚೌದರಿ, ಮಹಿಳಾ ಆಯೋಗ ಅಧ್ಯಕ್ಷೆ

ಕರ್ನಾಟಕ ತುರ್ತು ಸಹಾಯವಾಣಿ 112, ಮಹಿಳಾ ಸಹಾಯವಾಣಿ 181, ಸೈಬರ್ ಸಹಾಯವಾಣಿ 1908 ಸಂಖ್ಯೆಗಳನ್ನು ಮೊಬೈಲ್‌ಗಳಲ್ಲಿ ನಮೂದಿಸಿ ಅವಶ್ಯವಿದ್ದಾಗ ಕರೆ ಮಾಡಿ ಸಹಾಯ ಪಡೆಯಬೇಕೆಂದು ಸಲಹೆ ನೀಡಿದರು. ಯಾವುದೇ ಒಂದು ಪ್ರಕರಣ ನಡೆದರೆ ಯಾವುದಾದರೂ ಪೊಲೀಸ್ ಠಾಣೆಗೆ ಭೇಟಿ ನೀಡಿ ಜೀರೋ ಎಫ್‌ಐಆರ್ ಅನ್ನು ದಾಖಲಿಸಿ ಸಂಬಂಧಪಟ್ಟ ಠಾಣೆಗೆ ವರ್ಗಾವಣೆ ಮಾಡುತ್ತಾರೆ. ತಂದೆ ತಾಯಿ ಹಳ್ಳಿಯಿಂದ ಮಕ್ಕಳನ್ನು ಓದಲು ಕಳುಹಿಸಿರುತ್ತಾರೆ. ಈ ಸಮಯದಲ್ಲಿ ಮೊಬೈಲ್‌ಗಳಿಗೆ ನಾವು ದಾಸರಾಗದೆ ಅಮೂಲ್ಯವಾದ ಸಮಯವನ್ನು ಬಳಸಿಕೊಂಡು ದೊಡ್ಡ ಸಾಧನೆಯನ್ನು ಮಾಡಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಾತಿರುವುದಕ್ಕಿಂತ ಹೆಚ್ಚಾಗಿ ಸಾವಿರಾರು ಸೈಬರ್ ಪ್ರಕರಣಗಳು ದಾಖಲಾಗುತ್ತಿವೆ. ಸಾಮಾಜಿಕ ಜಾಲತಾಣದಲ್ಲಿ ತಮ್ಮ ವೈಯಕ್ತಿಕ ವಿಷಯ, ದೂರವಾಣಿ ಸಂಖ್ಯೆಯನ್ನು ಹಂಚಿಕೊಳ್ಳಬಾರದು. ಎಲ್ಲವನ್ನೂ ಗೌಪ್ಯವಾಗಿಡಬೇಕು. ಸಾಮಾಜಿಕ ಜಾಲತಾಣದಲ್ಲಿ ಬರುವ ಎಪಿಕೆ ಅಪ್ಲಿಕೇಶನ್ ಲಿಂಕ್‌ಗಳನ್ನು, ವಿಡಿಯೋ ಕರೆಗಳನ್ನು ಓಪನ್ ಮಾಡಬಾರದು ಎಂದು ತಿಳಿಸಿದರು.

### ಅಪರಿಚಿತರ ಜೊತೆ ಸಲುಗೆ ಬೇಡ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಅವರು ಮಾತನಾಡಿ, ಸಾಮಾಜಿಕ ಜಾಲತಾಣ ಬಳಕೆಯ ಬಗ್ಗೆ ಹೆಣ್ಣು ಮಕ್ಕಳಿಗೆ ಹೆಚ್ಚಿನ ಅರಿವು ಇರಬೇಕು. ಅಪರಿಚಿತ ವ್ಯಕ್ತಿಯ ಸ್ನೇಹ ಮಾಡುವಾಗ ಎಚ್ಚರವಿರಲಿ, ಫೇಸ್‌ಬುಕ್ ಹಾಗೂ ಇನ್ಸ್ಟಾಗ್ರಾಮ್‌ಗಳಲ್ಲಿ ಫಾಲೋ ಹೆಚ್ಚಳಕ್ಕಾಗಿ ಅಪರಿಚಿತರ ಸ್ನೇಹ ಬೆಳೆಸಬಾರದೆಂದು ಕಿವಿಮಾತು ಹೇಳಿದರು.

ಪ್ರಸ್ತುತ ಸಮಾಜದಲ್ಲಿ ತಾಂತ್ರಿಕತೆ ಬದಲಾವಣೆಯಾದಂತೆ ಸಮಸ್ಯೆಗಳು ಹೆಚ್ಚಾಗುತ್ತಿವೆ. ಯಾವುದೇ ಸಮಸ್ಯೆಯನ್ನು ಎದುರಿಸಬೇಕಾದರೆ ಧೈರ್ಯವಾಗಿರಬೇಕು. ಏನೇ ಸಹಾಯ ಬೇಕಿದ್ದರೂ ಹತ್ತಿರದ ಪೊಲೀಸ್ ಠಾಣೆಗೆ ಭೇಟಿ ನೀಡಬೇಕು ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಅಪರ ಜಿಲ್ಲಾಧಿಕಾರಿ ಮಂಜುನಾಥ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಧರಣಿ ಕುಮಾರ, ಪ್ರಾಂಶುಪಾಲ ಬಸವರಾಜ್ ಉಪಸ್ಥಿತರಿದ್ದರು.

# ಭಾಷಣ ಬಿಟ್ಟು ಅಭಿವೃದ್ಧಿಗೆ ಗಮನ ಹರಿಸಿ: ಬಿ. ಶಿವರಾಂ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಗೌಣವಾಗಿದೆ ಎಂದು ಆರೋಪಿಸುವವರು ವಿದ್ಯುತ್ ಕಾಮಗಾರಿಗಾಗಿ 127.37 ಕೋಟಿ ರೂ. ಅನುದಾನಕ್ಕೆ ಅನುಮೋದನೆ ಪಡೆದಿರುವುದನ್ನು ಮರೆಮಾಚುತ್ತಿದ್ದಾರೆ. ಕೇವಲ ಭಾಷಣ ಮಾಡುವುದು ಬಿಟ್ಟು ಅಭಿವೃದ್ಧಿಗೆ ಆದ್ಯತೆ ನೀಡಲಿ ಎಂದು ಮಾಜಿ ಸಚಿವ ಬಿ.ಶಿವರಾಂ ಶಾಸಕ ಹೆಚ್. ಕೆ. ಸುರೇಶ್ ವಿರುದ್ಧ ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಗ್ರಾಮೀಣ ಪ್ರದೇಶದ ರೈತರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ವಿದ್ಯುತ್ ಸರಬರಾಜು ಮಾಡಲು ತಾಲೂಕಿನಾದ್ಯಂತ 13ಕ್ಕೂ ಹೆಚ್ಚು ಕಡೆ ಸಬ್ ಸ್ಟೇಷನ್‌ಗಳ ಕಾಮಗಾರಿಗಾಗಿ 127.37 ಕೋಟಿ ರೂ. ಅನುಮೋದನೆ ನೀಡಿದೆ. ಇದು ನಮ್ಮ ಶ್ರಮ




ಕಾಂಗ್ರೆಸ್ ಸರ್ಕಾರದ ಕೊಡುಗೆಯಾಗಿದೆ. ವಿದ್ಯುತ್ ಸಬ್ ಸ್ಟೇಷನ್ ನಿರ್ಮಿಸಿ ತಾಲೂಕಿನ ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ದೊರಕಿಸಿಕೊಡಲಾಗುತ್ತದೆ. ಕ್ಷೇತ್ರ ವ್ಯಾಪ್ತಿಯಲ್ಲಿ ವಿದ್ಯುತ್, ನೀರಾವರಿ, ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರದ ಪ್ರಗತಿಗೆ ಸಾಕಷ್ಟು ಕೊಡುಗೆ ನೀಡಲಾಗಿದೆ. ನನೆಗುದಿಗೆ ಬಿದ್ದಿದ್ದ ಹೋಬಳಿಗಳಲ್ಲಿ ವಿದ್ಯುತ್ ಸಬ್ ಸ್ಟೇಷನ್‌ಗಳಲ್ಲಿ ವಿದ್ಯುತ್ ಲೋಡ್ ಹೆಚ್ಚಿಸಿ ಬಿಡುಗಡೆ ಅನುದಾನದಲ್ಲಿ ಕಾಮಗಾರಿ ಪುನಾರಂಭಕ್ಕೆ ಸಿದ್ಧತೆಯಾಗಿದೆ ಎಂದರು.

ಸ್ಥಳೀಯ ಶಾಸಕರು ಕೇವಲ 10, 20 ಲಕ್ಷ ರೂ. ಗುದ್ದಲಿ ಪೂಜೆಗಳಿಗೆ ಹಾಗೂ ಶಂಕು ಸ್ಥಾಪನೆಗಳಿಗೆ ಮಾತ್ರ ಸೀಮಿತವಾಗಿದ್ದಾರೆ. ಅಲ್ಲದೆ ಸ್ವತಂತ್ರ್ಯ ದಿನಾಚರಣೆ, ಗಣರಾಜ್ಯೋತ್ಸವದಂತಹ ಕಾರ್ಯಕ್ರಮಗಳಲ್ಲಿ ತ್ಯಾಗ ಬಲಿದಾನ ಮಾಡಿದಂತ ಮಹಾನ್ ವ್ಯಕ್ತಿಗಳನ್ನ ನೆನೆಯದೆ ಬೇಲೂರಿನ ಅಭಿವೃದ್ಧಿ ನನ್ನ ಗುರಿ ಎಂದು ಭಾಷಣದುದ್ದಕ್ಕೂ ಮಾತನಾಡುತ್ತಾರೆ. ವಿದ್ಯುತ್ ಬಗ್ಗೆ ತಾಲೂಕಿನಲ್ಲಿ ಇವರ ಕೊಡುಗೆ ಏನು ನೀರಾವರಿ ಬಗ್ಗೆ ಇವರ ಕೊಡುಗೆ ಏನಿದೆ ಎಂಬುದನ್ನು ಹೇಳಲಿ ಎಂದು ಸವಾಲೆಸೆದರು.


ಇಂಧನ ಸಚಿವ ಕೆ.ಜೆ.ಜಾರ್ಜ್ ಸೇರಿದಂತೆ ಮುಖ್ಯಮಂತ್ರಿ ಬಳಿ ಹೋಗುತ್ತಾರೆ. ನಾವೆಲ್ಲ ಚಿಕ್ಕವರು ಅಧಿಕಾರಿಗಳ ಹತ್ತಿರ ಹೋಗಿ ಕೆಲಸ ಮಾಡಿಸಿಕೊಂಡು ಬಂದಿದ್ದೇವೆ ಎಂದು ದಾಖಲೆ ತೋರಿಸಿ ಬೇಲೂರು ಕ್ಷೇತ್ರದಲ್ಲಿ ಇಂದಿನ ಮತ್ತು ಹಾಲಿ ಶಾಸಕರು ಶಾಶ್ವತ ಅಭಿವೃದ್ಧಿ ಯೋಜನೆಗಳನ್ನು ತರಲು ವಿಫಲರಾಗಿದ್ದಾರೆ. ಇವರ ಅಭಿವೃದ್ಧಿ ಕಾರ್ಯ ಶೂನ್ಯವೆಂದು ಟೀಕಿಸಿದರು. ಬೇಲೂರು ಕ್ಷೇತ್ರಕ್ಕೂ ಗಂಡಸಿ ಕ್ಷೇತ್ರವನ್ನು ಹೋಲಿಸಿ ನೋಡಿದರೆ ಅಜಗಜಾಂತರ ವ್ಯತ್ಯಾಸವಿದೆ ಎಂಬುದು ನಮ್ಮ ಕಣ್ಣಿಗೆ ಎದ್ದು ಕಾಣಿಸುತ್ತಿದೆ. ತಾಲೂಕಿನ ಬಹಳ ಕಡೆ ವಿದ್ಯುತ್ ಸಬ್ ಸ್ಟೇಷನ್‌ಗಳೇ ಇಲ್ಲ. ಹೋಬಳಿಯಲ್ಲಿ ವಿದ್ಯುತ್ ಸ್ಟೇಷನ್ ಇಲ್ಲದೇ ಇರುವುದನ್ನ ರಾಜ್ಯದಲ್ಲೇ ನೋಡಿದ್ದು ನಾನು ಬೇಲೂರು ಕ್ಷೇತ್ರದಲ್ಲಿ ಅದರಲ್ಲೂ ತಾಲೂಕಿನ ಬಿಕ್ಕೋಡು ಹೋಬಳಿಯಲ್ಲಿ ವಿದ್ಯುತ್ ಸಬ್ ಸ್ಟೇಷನ್ ಇಲ್ಲದೆ ಇರುವುದು ಎಷ್ಟು ವಿಪರ್ಯಾಸ ಯಾವ ಪ್ರಮಾಣದಲ್ಲಿ ಅಭಿವೃದ್ಧಿ ಇರಬಹುದೆಂದು ಜನರೇ ಅರ್ಥಮಾಡಿಕೊಳ್ಳಬೇಕಾಗಿದೆ ಎಂದರು.

# ದ್ವಿಭಾಷಾ ಸೂತ್ರ ಅನುಷ್ಠಾನಕ್ಕೆ ಸಾಹಿತಿ ಭಗವಾನ್ ಆಗ್ರಹ

## ಮಾಣಿಕ್ಯ ಪ್ರಕಾಶನ ದಶಮಾನೋತ್ಸವ | ರಾಜ್ಯ ಮಟ್ಟದ ಕವಿಗೋಷ್ಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯದಲ್ಲಿ ಮೊದಲ ಭಾಷೆಯಾಗಿ ಕನ್ನಡ ಹಾಗು ದ್ವಿತೀಯ ಭಾಷೆಯಾಗಿ ಇಂಗ್ಲಿಷ್ ಜಾರಿಯಾಗಬೇಕು. ತೃತೀಯ ಭಾಷಾ ಸೂತ್ರಕ್ಕೆ ಯಾವ ಕಾರಣಕ್ಕೂ ಒಪ್ಪಬಾರದು ಎಂದು ಸಾಹಿತಿ ಡಾ. ಕೆ.ಎಸ್. ಭಗವಾನ್ ಆಗ್ರಹಿಸಿದರು.




ನಗರದ ಸಂಸ್ಕೃತ ಭವನದಲ್ಲಿ ಮಾಣಿಕ್ಯ ಪ್ರಕಾಶನದಿಂದ ಭಾನುವಾರ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ 10ನೇ ಕವಿ ಕಾವ್ಯ ಸಂಭ್ರಮ, ಕನ್ನಡ ರಾಜ್ಯೋತ್ಸವ ಹಾಗೂ ದಶಮಾನೋತ್ಸವ ಉದ್ಘಾಟಿಸಿ ಮಾತನಾಡಿದರು.

ಕನ್ನಡ ಇಲ್ಲಿನ ಮೂಲ ಭಾಷೆಯಾಗಿದ್ದು ಇಂಗ್ಲಿಷ್ ವ್ಯಾವಹಾರಿಕವಾಗಿ ಅನಿವಾರ್ಯವಾಗಿದೆ. ಹಿಂದಿ ಕಲಿಯಲೇಬೇಕೆಂಬ ಕಡ್ಡಾಯ ನಿಯಮವನ್ನು ಕನ್ನಡಿಗರು ಒಪ್ಪಬಾರದೆಂದರು. ದೇಶದ ಇತಿಹಾಸವನ್ನು ಎಲ್ಲರೂ ಸರಿಯಾಗಿ ಅರ್ಥ ಮಾಡಿಕೊಳ್ಳಬೇಕು. ಇನ್ನೊಬ್ಬರನ್ನು ಮೆಚ್ಚಿಸಲು ಬರವಣಿಗೆಯಲ್ಲಿ ತೊಡಗಬಾರದು. ಹೃದಯ ಮತ್ತು ಮನಸ್ಸು ಏನು ಹೇಳುತ್ತದೆಯೋ ಅದನ್ನು ಮಾತ್ರ ಬರೆಯಬೇಕು. ನಮ್ಮ ಬರವಣಿಗೆ ಸತ್ಯ ನಿಷ್ಠವಾಗಿರಬೇಕು. ನಮ್ಮ ಆಲೋಚನೆಗಳನ್ನು ವಿರೋಧಿಸುವವರು ಇದ್ದೇ ಇರುತ್ತಾರೆ. ಸಮಾಜ ಎಂದ ಮೇಲೆ ನಮ್ಮನ್ನು ಪ್ರೀತಿಸುವ ಹಾಗೂ ದ್ವೇಷಿಸುವ ಜನರು ಇರುತ್ತಾರೆ. ಅದಕ್ಕೆ ತಲೆ ಕೆಡಿಸಿಕೊಳ್ಳದೆ ಸಮಾಜದ ಹಿತಕ್ಕಾಗಿ ಸತ್ಯಕ್ಕಾಗಿ ನಮ್ಮ ಲೇಖನಿ ಬಳಕೆಯಾಗಬೇಕು ಎಂದರು.

ದೇಶದ ಪ್ರತಿಯೊಬ್ಬರಿಗೂ ಶಿಕ್ಷಣ ಸಿಗಬೇಕೆಂದರೆ ಬ್ಯಾಂಕ್ ಗಳನ್ನು ರಾಷ್ಟ್ರೀಕರಣ ಮಾಡಿದ ರೀತಿ ಶಿಕ್ಷಣವನ್ನು ಮಾಡಬೇಕು. ಡಾ. ಬಿ.ಆರ್. ಅಂಬೇಡ್ಕರ್ ಅವರ ಸಂವಿಧಾನದ ನೆರವಿನಿಂದ ಶೂದ್ರರು ಇಂದು ಅಕ್ಷರ ಕಲಿಯುವಂತಾಗಿದೆ. ಸಾವಿರಾರು ವರ್ಷಗಳಿಂದ ಶಿಕ್ಷಣವೆಂದರೆ ಕೇವಲ ಮೇಲ್ಜಾತಿಯವರಿಗೆ ಸೀಮಿತ ಎಂಬ ಪರಿಸ್ಥಿತಿ ಇತ್ತು.

ಸಂವಿಧಾನ ಜಾರಿಯಾದ ಬಳಿಕ ಆ ಪರಿಸ್ಥಿತಿ ಸ್ವಲ್ಪ ಬದಲಾಗಿದೆ. ಎಲ್ಲರೂ ಸ್ವಾವಲಂಬಿ, ಘನತೆಯ ಬದುಕು ಕಟ್ಟಿಕೊಳ್ಳಬೇಕೆಂದರೆ ಶಿಕ್ಷಣ ಮುಖ್ಯ. ಆದ್ದರಿಂದ ಬ್ಯಾಂಕ್‌ಗಳನ್ನು ರಾಷ್ಟ್ರೀಕರಣ ಮಾಡಿದ ರೀತಿಯಲ್ಲಿ ಶಿಕ್ಷಣವನ್ನು ಮಾಡಬೇಕು ಎಂದ ಅವರು, ಬ್ರಿಟಿಷರು ನಮ್ಮ ದೇಶಕ್ಕೆ ಬಾರದೆ ಇದ್ದಿದ್ದರೆ ಎಲ್ಲರಿಗೂ ಶಿಕ್ಷಣ ಪಡೆಯುವ ಅವಕಾಶ ಸಿಗುತ್ತಿರಲಿಲ್ಲವೆಂದು ಅಭಿಪ್ರಾಯಪಟ್ಟರು.

ಈ ದೇಶದಲ್ಲಿ ಶೇ. 3 ರಷ್ಟು ಬ್ರಾಹ್ಮಣರಿದ್ದರೆ ಶೇ. 97 ರಷ್ಟು ಶೂದ್ರರಿದ್ದಾರೆ. ಆದರೂ ಬ್ರಾಹ್ಮಣರೇ ಎಲ್ಲದರಲ್ಲೂ ಶ್ರೇಷ್ಠ ಎಂಬ ಮನಸ್ಥಿತಿ ನಿರ್ಮಾಣವಾಗಿತ್ತು. ಡಾ.ಬಿ.ಆರ್. ಅಂಬೇಡ್ಕರ್ ಅವರು ಈ ಎಲ್ಲಾ ಶೋಷಣೆಗಳನ್ನು ಅನುಭವಿಸಿ ಕಣ್ಣೀರು ಹಾಕಿದರು.

ಭವಿಷ್ಯದ ಪೀಳಿಗೆಗೆ ಅನುಕೂಲ ಮಾಡಿಕೊಡಬೇಕೆಂದು ಅವರು ಸಾಕಷ್ಟು ಹೋರಾಟ ನಡೆಸಿದರು. ಅದರ ಪ್ರತಿಫಲವೇ ನಾವು ಇವತ್ತು ಅಕ್ಷರ ಕಲಿಯುವಂತಾಗಿದೆ ಎಂದು ಹೇಳಿದರು.

ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ಅಪರ ಕಾರ್ಯದರ್ಶಿ ಹೆಚ್.ಬಿ.ಮದನ್‌ಗೌಡ ಅವರು ಮಾತನಾಡಿ, ಶಿಕ್ಷಕ ಕೊಟ್ರೇಶ್ ಎಸ್.ಉಪ್ಪಾರ್ ಹಾಗೂ ದೀಪಾ ಉಪ್ಪಾರ್ ಅವರು ಹತ್ತು ವರ್ಷಗಳಿಂದ ಸಾಹಿತ್ಯ ಕ್ಷೇತ್ರದಲ್ಲಿ ಸಲ್ಲಿಸುತ್ತಿರುವ ಸೇವೆ ಶ್ಲಾಘನೀಯವಾದುದು ಎಂದರು.

### ಹೊಯ್ಸಳ ಸಾಂಸ್ಕೃತಿಕ ಪ್ರಶಸ್ತಿ ಪ್ರದಾನ

ಹಾಸನದ ಜಿ.ಪ್ರಕಾಶ್, ಕೊಡಗು ಜಿಲ್ಲೆಯ ಡಾ. ರಘು ಕೋಟಿ, ಮೈಸೂರಿನ ಡಾ. ಹೆಚ್.ಎಲ್.ಶಿವಬಸಪ್ಪ, ಅರಸೀಕೆರೆಯ ಕೆ.ಎಸ್.ಮಂಜುನಾಥ್ ಹಾಗು ವೈ.ಎಸ್.ರಮೇಶ್ ಅವರಿಗೆ ಹೊಯ್ಸಳ ಸಾಂಸ್ಕೃತಿಕ ರಾಜ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು. ನಂತರ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭ ನೆರವೇರಿತು.

ಕನ್ನಡ ಸಾಹಿತ್ಯಕ್ಕೆ ಜಿಲ್ಲೆಯ ಕೊಡುಗೆ ಸಾಕಷ್ಟಿದೆ. ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತ ಸಾಹಿತಿ ಹಾಸನದವರು. ಅದೇ ರೀತಿ ವಿಶ್ವ ಮಟ್ಟದಲ್ಲಿ ಹೆಸರು ಮಾಡಿದ್ದ ಎಸ್.ಎಲ್.ಭೈರಪ್ಪ ಅವರು ನಮ್ಮ ಜಿಲ್ಲೆಯವರೇ ಎನ್ನುವುದು ಖುಷಿಯ ವಿಚಾರ. ಎಲೆಮರೆ ಕಾಯಿಯಂತಿರುವ ಲೇಖಕರನ್ನು ಗುರುತಿಸಿ ಅವರಿಗೆ ವೇದಿಕೆ ಕಲ್ಪಿಸುವ ಕೆಲಸವನ್ನು ಮಾಣಿಕ್ಯ ಪ್ರಕಾಶನ ಹಾಗು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕವಿಕಾವ್ಯ ಸಂಭ್ರಮದ ಸರ್ವಾಧ್ಯಕ್ಷೆ ವಾಣಿಶೆಟ್ಟಿ ಮಾತನಾಡಿ, ಸಾಮರಸ್ಯದ ಬದುಕಿಗೆ ಪುಸ್ತಕ ಓದಬೇಕು. ಸಾಮಾಜಿಕ ಸಾಮರಸ್ಯದಿಂದ ಮನುಷ್ಯ ಉನ್ನತ ಮಟ್ಟಕ್ಕೆ ಏರುತ್ತಾನೆ. ಶಾಲಾ ದಿನಗಳಿಂದಲೇ ಸಾಹಿತ್ಯದತ್ತ ಆಸಕ್ತಿ ಬೆಳೆಸಿಕೊಂಡರೆ ಅಂತವರು ನೆಮ್ಮದಿ ಬದುಕು ಕಟ್ಟಿಕೊಳ್ಳಬಹುದೆಂದು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಜಿಲ್ಲಾ ಗೌರವಾಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ಮಾಣಿಕ್ಯ ಪ್ರಕಾಶನ ನಡೆಸುವ ಕಾರ್ಯಕ್ರಮಗಳು ಅಚ್ಚುಕಟ್ಟಾಗಿರುತ್ತವೆ. ಲೇಖಕರನ್ನು ಗುರುತಿಸಿ ಬೆಳೆಸುವ ಪರಿ ಮೆಚ್ಚುವಂತಹುದು. ಇಂತಹ ಕಾರ್ಯಕ್ರಮಗಳು ಹೆಚ್ಚಾಗಲಿ ಎಂದು ಆಶಿಸಿದರು.

ಲೇಖಕರಾದ ವಿಶ್ವೇಶ್ವರ್ ಮೇಟಿ, ಸತೀಶ್ ಜವರೇಗೌಡ, ನಾಗರಾಜ್ ಹೆತ್ತೂರು ಮಾತನಾಡಿದರು. ಸಾಹಿತಿ ಕೊಟ್ರೇಶ್ ಎಸ್. ಉಪ್ಪಾರ್ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರಕಾಶಕಿ ದೀಪಾ ಉಪ್ಪಾರ್, ನಾಗರಾಜ್ ದೊಡ್ಡಮನಿ, ಬಸವರಾಜ್ ಇತರರಿದ್ದರು.

# ರಕ್ತದಾನ ಅತ್ಯಂತ ಶ್ರೇಷ್ಠ ದಾನ ಶಾಸಕ ಸಿಮೆಂಟ್ ಮಂಜು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ನಿಯಮಿತವಾಗಿ ರಕ್ತದಾನ ಮಾಡಿದರೆ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಭಾನುವಾರ ಪಟ್ಟಣದ ಪುರಭವನದಲ್ಲಿ ಹಿಂದು ಹಿತರಕ್ಷಣಾ ವೇದಿಕೆ, ಹಾಸನ ಜೀವ ರಕ್ತ ನಿಧಿ, ಹಾಗೂ ಇತರ ಸಂಘಟನೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರದಲ್ಲಿ ಮಾತನಾಡಿ, ರಕ್ತಕ್ಕೆ ಪರ್ಯಾಯ ಅಮೃತ ಮತ್ತೊಂದಿಲ್ಲ. ರಕ್ತ ಕೊಡುವುದರಿಂದ ನಿಶಕ್ತರಾಗುತ್ತಾರೆ ಎಂಬ ಭಾವನೆ ಕೆಲವರಲ್ಲಿ ಇದೆ. ಇದು ತಪ್ಪು ಅಭಿಪ್ರಾಯ. ರಕ್ತದಾನ ಮಾಡುವುದರಿಂದ ಯಾವುದೇ ದುಷ್ಪರಿಣಾಮವಾಗುವುದಿಲ್ಲ. ಅಪಘಾತ, ಅನಾರೋಗ್ಯ ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿ ಕಂಡು ಬರುತ್ತದೆ. ಈ ನಿಟ್ಟಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಮಾಡಲು ಪ್ರತಿಯೊಬ್ಬರು ಮುಂದಾಗಬೇಕು. ಹಿಂದು ಹಿತ ರಕ್ಷಣಾ ವೇದಿಕೆ ಪ್ರತಿವರ್ಷ ರಕ್ತದಾನ ಶಿಬಿರ ಆಯೋಜಿಸುತ್ತಿರುವುದು ಸಂತೋಷದ ವಿಷಯವಾಗಿದೆ. ರಕ್ತದಾನದ ಜೊತೆಗೆ ಅಂಗಾಂಗಳ ದಾನವನ್ನು ಮಾಡಲು ಸಹ ನೊಂದಣಿ ಮಾಡಿಸಿಕೊಳ್ಳಲು ಪ್ರತಿಯೋರ್ವರು ಮುಂದಾಗಬೇಕೆಂದು ಅಭಿಪ್ರಾಯಪಟ್ಟರು.

ಹಿಂದು ಹಿತ ರಕ್ಷಣಾ ವೇದಿಕೆಯ ರಾಜ್ಯ ಮುಖಂಡ ರಘು ಸಕಲೇಶಪುರ ಮಾತನಾಡಿ, ಪ್ರತಿವರ್ಷದಂತೆ ಈ ವರ್ಷವು ಸಂಘಟನೆ ವತಿಯಿಂದ ಅಯೋಧ್ಯೆ ಹೋರಾಟದಲ್ಲಿ ಬಲಿಯಾದವರ ಜ್ಞಾಪಕಾರ್ಥವಾಗಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದೆ. ಸುಮಾರು 200ಕ್ಕೂ ಹೆಚ್ಚು ಮಂದಿ ರಕ್ತದಾನ ಮಾಡಿರುವುದು ಸಂತೋಷದ ವಿಷಯ ಎಂದರು.

ನಗರ ಠಾಣೆ ಆರಕ್ಷಕ ನಿರೀಕ್ಷಕ ವನರಾಜ್ ಹಾಗೂ ಆರಕ್ಷಕ ವೃತ್ತ ನಿರೀಕ್ಷಕ ಮಹಾಂತೇಶ್ ಪಾಟೀಲ್ ಕಾರ್ಯಕ್ರಮಕ್ಕೆ ಭೇಟಿ ನೀಡಿದರು.

ಡಾ. ಸುಧಾಕರ್, ಮುಖಂಡರಾದ ಲಕ್ಷ್ಮೀರಂಗನಾಥ್, ಪ್ರತಾಪ್ ಹೆತ್ತೂರು, ನಾರಾಯಣ ಆಳ್ವ, ರಾಜು, ಬಾಬುಜೀ ನಗರ್ ವಾಲ್, ಮಂಜುನಾಥ್ ಕಬ್ಬಿನಗದ್ದೆ, ಹಿಂದು ಕಾರ್ಯಕರ್ತರಾದ ಕೌಶಿಕ್, ಶಿವು ಜಿಪ್ಪಿ, ದುಷ್ಯಂತ್ ಗೌಡ ಹಾಜರಿದ್ದರು.

# ಪೌರಾಣಿಕ ನಾಟಕಗಳಿಂದ ವ್ಯಕ್ತಿತ್ವ ವಿಕಸನ : ಸಂಸದ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಹಿಳಾ ಪೌರಾಣಿಕ ನಾಟಕಗಳು ಕನ್ನಡ ರಂಗಭೂಮಿಯಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದು, ಸಾಮಾಜಿಕ ಹಾಗೂ ಸಾಹಿತ್ಯಿಕ ವಲಯಗಳಲ್ಲಿ ಮಹತ್ತರ ಪಾತ್ರ ವಹಿಸಿವೆ ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.



ಪಟ್ಟಣದ ಮಾಧ್ಯಮಿಕ ಶಾಲಾ ಆವರಣದಲ್ಲಿ ಚಾಮುಂಡೇಶ್ವರಿ ಹಾಗೂ ಕನ್ನಡಾಂಬೆ ಕಲಾಸಂಘದ ವತಿಯಿಂದ ಆಯೋಜಿಸಿದ್ದ ಕುರುಕ್ಷೇತ್ರ ಅಥವಾ ಧರ್ಮ ರಾಜ್ಯ ಸ್ಥಾಪನೆ ಪೌರಾಣಿಕ ನಾಟಕ ಉದ್ಘಾಟಿಸಿ ಮಾತನಾಡಿ, ಮಹಾಭಾರತ, ರಾಮಾಯಣ ಹಾಗೂ ಇತರ ಪೌರಾಣಿಕ ನಾಟಕಗಳು ಸಾಮಾಜಿಕ ಪರಿವರ್ತನೆಗೆ ಪ್ರೇರಣೆಯಾಗಿವೆ. ಈ ನಾಟಕಗಳು ಮಹಿಳಾ ಶಕ್ತಿಯ ಅನಾವರಣ ಹಾಗೂ ಪೌರಾಣಿಕ ಕಥೆಗಳ ಮೂಲಕ ನೈತಿಕ ಸಂದೇಶವನ್ನು ನೀಡುವಲ್ಲಿ ಪ್ರಮುಖ ಪಾತ್ರ ವಹಿಸಿವೆ. ನಾಟಕದಲ್ಲಿ ಮಹಿಳಾ ಕಲಾವಿದರು ಭಾಗವಹಿಸುವುದರಿಂದ ಮಹಿಳಾ ಸಬಲೀಕರಣ ಹಾಗೂ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆಗೆ ಕಾರಣವಾಗುತ್ತದೆ ಎಂದರು.

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಮಹಿಳಾ ನಾಟಕಗಳಲ್ಲಿ ಪುರಾಣ ಕಥೆಗಳ ಮಹಿಳಾ ಪಾತ್ರಗಳು ಧೈರ್ಯ, ಆತ್ಮ ವಿಶ್ವಾಸ ಮತ್ತು ತಮ್ಮದೇ ಆದ ಕಲಾ ಪ್ರೌಢಿಮೆಯನ್ನು ಅನಾವರಣಗೊಳಿಸಲು, ಪ್ರಾಯೋಗಿಕ ವಿಮರ್ಶೆ, ಪಾತ್ರಗಳಿಗೆ ಜೀವ ತುಂಬುವಲ್ಲಿ ಮಹಿಳಾ ಕಲಾವಿದರು ರಂಗಭೂಮಿಗೆ ಹೊಸ ಸ್ಪಂದನೆ ನೀಡುತ್ತಿದ್ದಾರೆ. ಪೌರಾಣಿಕ ನಾಟಕ ಮೆರುಗು ನೀಡಿದ್ದು, ಎಲ್ಲಾ ಪಾತ್ರಗಳಲ್ಲಿ ಮಹಿಳೆಯರೇ ಅಭಿನಯ ಮಾಡಿರುವುದು ಗಮನರ್ಹವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

### ಪಾತ್ರ ಪರಿಚಯ

ಸೂತ್ರಧಾರಿ, ಸಾತ್ಯಕಿ ಹಾಗೂ ದ್ರೋಣನ ಪಾತ್ರದಲ್ಲಿ ಶಶಿಕಲಾ ಚಂದ್ರಶೇಖರ್, ಶ್ರೀಕೃಷ್ಣನ- ಮಮತಾ ದಿನೇಶ್, ದುರ್ಯೋಧನ - ಜೆ.ಎನ್.ಯಶಸ್ವಿನಿ, ಧರ್ಮರಾಯ - ಕುಶಲಮತಿ ಸುಬ್ಬೇಗೌಡ, ಕರ್ಣ-ಕಾವ್ಯ, ಭೀಮ-ಭುವನೇಶ್ವರಿ, ಶಕುನಿ-ರಾಧಾ ರುದ್ರೇಶ್, ಅರ್ಜುನ-ಹೇಮಾವತಿ ನಾಗೇಶ್, ಧೃತರಾಷ್ಟ್ರ ಹಾಗೂ ಕುಂತಿ-ರಾಧಾ ಪುಟ್ಟಣ್ಣ, ವಿದುರ-ಪುಷ್ಪ ಸೋಮಶೇಖರ್, ಸೈಂಧವ-ವೀಣಾ ಅಶೋಕ್, ಭೀಷ್ಮ-ವಸಂತ, ಅಭಿಮನ್ಯು-ಪ್ರಿಯಾಂಕ, ರುಕ್ಮಿಣಿ-ರಾಣಿ, ಗಾಂಧಾರಿ-ಶಾಂತ ದೇವರಾಜ್, ದ್ರೌಪದಿ-ಎಸ್ .ಬಿ.ದ್ರಾಕ್ಷಾಯಿಣಿ, ಉತ್ತರೆ - ಪ್ರಿಯ ಬಾಲಕೃಷ್ಣನ ಪಾತ್ರದಲ್ಲಿ ಲೇಕ್ಷಣ, ಶಾರ್ವಿ ಸಂತೋಷ್, ತಾಸ್ವಿ ಸಂಜಯ್, ನರ್ತಕಿಯ ಪಾತ್ರದಲ್ಲಿ ತ್ರಿಷಾ, ಕೀರ್ತಿ ನಟಿಸಿ ಗಮನ ಸೆಳೆದರು.

ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ, ನಗರ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಣತಿ ಆನಂದ್, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಚ್.ಎನ್ ಲೋಕೇಶ್ ಹಡೇನಹಳ್ಳಿ, ಪುರಸಭೆ ಅಧ್ಯಕ್ಷ ಮೋಹನ್ ಕುಮಾರ್ ಮುಂತಾದವರಿದ್ದರು.

# ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡಿದರಷ್ಟೇ ಭವಿಷ್ಯ ಉಜ್ವಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡಿದರೆ ಮಾತ್ರ ಭವಿಷ್ಯದಲ್ಲಿ ಉತ್ತಮ ಸಮಾಜ ನಿರ್ಮಿಸಲು ಸಾಧ್ಯ ಎಂದು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.



ತಾಲ್ಲೂಕಿನ ಪುರಾಣ ಪ್ರಸಿದ್ಧ ಶ್ರೀಕ್ಷೇತ್ರ ಕಬ್ಬಳಿ ಶ್ರೀ ಬಸವೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವದ ಪ್ರಯುಕ್ತ ಶ್ರೀ ಬಸವೇಶ್ವರಸ್ವಾಮಿ ಆಂಗ್ಲ ಮಾಧ್ಯಮ ಶಾಲೆ ವತಿಯಿಂದ ಶನಿವಾರ ರಾತ್ರಿ ಆಯೋಜಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ, ಶಿಕ್ಷಣವು ಸಮಾಜದ ಬದಲಾವಣೆಯ ದಿಕ್ಸೂಚಿ ಆಶೀರ್ವಚನ ನೀಡಿದರು.

ಶಾಲೆಯಲ್ಲಿ ಸಿಗುವ ಮೌಲ್ಯಯುತ ಶಿಕ್ಷಣದ ಜೊತೆಗೆ ಮನೆಯಲ್ಲಿ ಪಾಲಕರು ನೀಡುವ ಸಂಸ್ಕಾರವು ಮಕ್ಕಳ ಬದುಕಿನ ಭವಿಷ್ಯಕ್ಕೆ ದಾರಿದೀಪವಾಗಲಿದೆ. ಸಂಸ್ಕಾರವಿಲ್ಲದ ಕೇವಲ ಶಿಕ್ಷಣ ಸಿಕ್ಕರೆ ಯಾವುದೇ ಪ್ರಯೋಜನವಾಗುವುದಿಲ್ಲ ಎಂದರು.

ಯಾವುದೇ ವ್ಯಕ್ತಿಯ ಧರ್ಮ, ಜಾತಿ ಹಾಗೂ ಧರಿಸಿರುವ ಬಟ್ಟೆಯನ್ನು ನೋಡಿ ಅಳೆಯಬಾರದು. ಮೌಲ್ಯಯುತ ಗುಣಗಳು ಹಾಗೂ ಮಾನವೀಯತೆಯ ವ್ಯಕ್ತಿತ್ವವನ್ನು ಗುರುತಿಸಿ ಗೌರವ ನೀಡಬೇಕು. ಅದೆಷ್ಟೇ ಹಣ ಮತ್ತು ಜಾತಿ ಸಂಪಾದಿಸಿದರೂ ಧರ್ಮ ಕಾರ್ಯಗಳಿಗೆ ವಿನಿಯೋಗವಾಗದಿದ್ದರೆ ಅದು ವ್ಯರ್ಥವೇ ಸರಿ ಎಂದು ತಿಳಿಸಿದರು.

ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್‌ನ ಆಡಳಿತಾಧಿಕಾರಿ ಡಾ.ಎ.ಟಿ.ಶಿವರಾಮ್ ಮಾತನಾಡಿ, ಮೌಲ್ಯಾಧಾರಿತ ಶಿಕ್ಷಣ ಸಿಗದೇ ಶೈಕ್ಷಣಿಕ ವ್ಯವಸ್ಥೆ ಪೂರ್ಣಗೊಳ್ಳುವುದಿಲ್ಲ.

ಬದುಕು ಸಹ ಮಧ್ಯಾಂತರದಲ್ಲಿ ತಟಸ್ಥವಾಗಿ ನಿಲ್ಲಲಿದೆ. ಆದ್ದರಿಂದ ಗುಣಮಟ್ಟದ ಮೌಲ್ಯಯುತ ಶಿಕ್ಷಣದ ಜೊತೆಗೆ ಸಂಸ್ಕಾರ ಸಿಕ್ಕರೆ ಮಾತ್ರ ವಿದ್ಯಾರ್ಥಿಗಳ ಬದುಕು ಹಸನಾಗಲು ಸಾಧ್ಯ ಎಂದರು.

2024-25 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ಪಡೆದ ವ್ಯಾಪ್ತಿಯ ಸರ್ಕಾರಿ, ಖಾಸಗಿ ಹಾಗೂ ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನಡೆಯಿತು. ನಂತರ ಶ್ರೀ ಬಸವೇಶ್ವರಸ್ವಾಮಿ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಶ್ರೀಕ್ಷೇತ್ರ ಕಬ್ಬಳಿ ಶಾಖಾ ಮಠದ ಶ್ರೀ ಶಿವಪುತ್ರನಾಥ ಸ್ವಾಮೀಜಿ, ಗುಡಿಗೌಡ ಪ್ರಕಾಶ್, ಸಿಆರ್ ಸಿ ಅನಿಲ್, ಇಸಿಓ ಶ್ರೀನಿವಾಸ್, ಮುಖ್ಯಶಿಕ್ಷಕ ಟಿ.ತಿಮ್ಮೇಗೌಡ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಶಿವನಂಜೇಗೌಡ, ಎನ್ .ಆರ್.ರತ್ನರಾಜ್, ಪ್ರಮುಖರಾದ ಹೊನ್ನೇಗೌಡ, ಶಿಕ್ಷಕ ವೃಂದ, ಪಾಲಕರು ಹಾಗೂ ಇತರರು ಇದ್ದರು.

# ಇತಿಹಾಸದಲ್ಲಿ ಈ ದಿನ

## ನವೆಂಬರ್-04

**1842:** ಅಮೆರಿಕದ ಅಧ್ಯಕ್ಷ ಅಬ್ರಹಾಂ ಲಿಂಕನ್ ಅವರು ಮೇರಿ ಟಾಡ್ ಲಿಂಕನ್ ಅವರನ್ನು ವಿವಾಹವಾದರು.

**1922:** ಬ್ರಿಟಿಷ್ ಪುರಾತತ್ವ ಶಾಸ್ತ್ರಜ್ಞ ಹಾವರ್ಡ್ ಕಾರ್ಟರ್ ಅವರು ಈಜಿಪ್ಟ್‌ನ ಫರೋ ತುಟಾನ್ಖಾಮನ್ ಸಮಾಧಿಯ ಪ್ರವೇಶ ಕಂಡುಹಿಡಿದರು.

**1956:** ಸೋವಿಯತ್ ಸೇನೆ ಹಂಗೇರಿ ಮೇಲೆ ದಾಳಿ ನಡೆಸಿ ಆಹಂಗೇರಿಯನ್ ಕ್ರಾಂತಿಟಗೆ ಕೊನೆ ಮಾಡಿದ ದಿನ.

**1979:** ಇರಾನ್‌ನಲ್ಲಿ ಅಮೆರಿಕ ರಾಯಭಾರ ಕಚೇರಿ ಮೇಲಿನ ದಾಳಿಯಲ್ಲಿ 52 ಅಮೆರಿಕನ್ನರು ಬಂಧಿತರಾದರು.

**2008:** ಬರಾಕ್ ಒಬಾಮಾ ಅವರು ಅಮೆರಿಕದ ಮೊದಲ ಆಫ್ರಿಕನ್ ಮೂಲದ ಅಧ್ಯಕ್ಷರಾಗಿ ಆಯ್ಕೆಯಾದರು.

### ಜನನ

**1740:** ಆಗಸ್ಟಸ್ ಮೊಂಟಗು ಟೋಪ್ಲೇಡಿ, Rock of Ages ಭಕ್ತಿಗೀತೆಯ ರಚನಕಾರ

**1916:** ರೂತ್ ಹ್ಯಾಂಡ್ಲರ್,Barbie ಗೊಂಬೆಯ ಸೃಷ್ಟಿಕರ್ತ ಹಾಗೂ ಕಂಪನಿಯ ಸ್ಥಾಪಕಿ

**1916** ವಾಲ್ಟರ್ ಕ್ರೊಂಕೈಟ್, ಪ್ರಸಿದ್ಧ ಅಮೆರಿಕನ್ ಸುದ್ದಿ ವಾಹಕ.

**1933:** ಚಾರ್ಲ್ಸ್ ಕೆ. ಕಾವ್, ಫೈಬರ್ ಆಪ್ಟಿಕ್ಸ್ ತಂತ್ರಜ್ಞಾನದ ಪಿತೃ, ನೋಬೆಲ್ ಪುರಸ್ಕೃತ ವಿಜ್ಞಾನಿ

**1969:** ಮ್ಯಾಥ್ಯೂ ಮ್ಯಾಕ್ಕಾನಹೇ, ಅಮೆರಿಕದ ಖ್ಯಾತ ಚಲನಚಿತ್ರ ನಟ

### ಮರಣ

**1847:** ಫೆಲಿಕ್ಸ್ ಮೆಂಡೆಲ್ಸೋನ್, ಜರ್ಮನ್ ಸಂಗೀತಗಾರ

**1918:** ವಿಲ್ಫ್ರೆಡ್ ಓವೆನ್, ಬ್ರಿಟಿಷ್ ಕವಿ, ಪ್ರಥಮ ವಿಶ್ವಯುದ್ಧದ ಯೋಧ

**1955:** ಅಲೆಕ್ಸಾಂಡರ್ ವ್ಲಾಡಿಮಿರೋವಿಚ್ ವೊರೋನೋಯ್, ಗಣಿತಜ್ಞ

**1995:** ಯಿತ್ಝಾಕ್ ರಾಬಿನ್, ಇಸ್ರೇಲ್‌ನ ಪ್ರಧಾನ ಮಂತ್ರಿ

# ಪ್ರತ್ಯೇಕ ಅಪಘಾತ: ಮೂವರು ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಚನ್ನರಾಯಪಟ್ಟಣ, ಕೊಣನೂರು ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಮೂವರು ಮೃತಪಟ್ಟಿದ್ದಾರೆ.

ಚಲಿಸುತ್ತಿದ್ದ ಟ್ರ್ಯಾಕ್ಟರ್ ಮೇಲಿಂದ ಬಿದ್ದು ವ್ಯಕ್ತಿ ಸಾವನ್ನಪ್ಪಿರುವ ಘಟನೆ ಚನ್ನರಾಯಪಟ್ಟಣ ತಾಲ್ಲೂಕಿನ ಗೂರನಹಳ್ಳಿ ಕೆರೆ ಸಮೀಪ ನಡೆದಿದೆ. ಬ್ಯಾಲದಕೆರೆ ಗ್ರಾಮದ ಬಿ.ಪಿ.ಮಂಜು ಮೃತರು. ಕಾರ್ಯನಿಮಿತ್ತ ಚನ್ನರಾಯಪಟ್ಟಣಕ್ಕೆ ಬಂದಿದ್ದ ಅವರು ವಾಪಾಸ್ ಊರಿಗೆ ಹೋಗಲು ವಾಹನಕ್ಕಾಗಿ ಕಾದು ನಿಂತಿದ್ದರು. ಆಗ ಟ್ರ್ಯಾಕ್ಟರ್ ಬಂದಿದ್ದು ಚಾಲಕ ಮಂಜು ಹಾಗೂ ಸಂಜಯ್ ಅವರು ಕೂರಿಸಿಕೊಂಡಿದ್ದಾರೆ. ಬಾಗೂರು ರಸ್ತೆಯ ಗೂರನಹಳ್ಳಿ ಕೆರೆ ಸಮೀಪದ ಸಿಮೆಂಟ್ ರಸ್ತೆಯಲ್ಲಿ ಜೋರಾಗಿ ಓಡಿಸಿದ್ದರಿಂದ ನಿಯಂತ್ರಣ ತಪ್ಪಿ ಮಂಜು ಕೆಳಗೆ ಬಿದ್ದಿದ್ದಾರೆ. ಗಂಭೀರ ಗಾಯಗೊಂಡಿದ್ದ ಅವರನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮತ್ತೊಂದು ಪ್ರಕರಣದಲ್ಲಿ ಬೈಕ್ ಮೇಲೆ ಕುಳಿತಿದ್ದ ವ್ಯಕ್ತಿ ಮೇಲೆ ಪಿಕಪ್ ವಾಹನ ಹರಿದು ಮೃತಪಟ್ಟಿರುವ ಘಟನೆ ಅರಕಲಗೂಡು ತಾಲೂಕು ಜಿ.ಹೊಸಳ್ಳಿ ಬಸ್ ನಿಲ್ದಾಣ ಸಮೀಪ ನಡೆದಿದೆ.

ರಾಮನಾಥಪುರ ಹೋಬಳಿ ಕಾಡ್ಲೂರು ಗ್ರಾಮದ ಶ್ರೀನಿವಾಸ್ ಮೃತರು. ಸ್ನೇಹಿತರಾದ ಮಹೇಶ್ ಹಾಗು ಶೇಖರ್ ಅವರೊಂದಿಗೆ ರಸ್ತೆ ಪಕ್ಕ ಬೈಕ್ ನಿಲ್ಲಿಸಿ ಮಾತನಾಡುತ್ತಾ ನಿಂತಿದ್ದಾಗ ರಾಮನಾಥಪುರದ ಕಡೆಯಿಂದ ವೇಗವಾಗಿ ಬಂದ ವಾಹನ ಡಿಕ್ಕಿಯಾಗಿದೆ. ತೀವ್ರ ರಕ್ತಸ್ರಾವವಾಗಿ ಶ್ರೀನಿವಾಸ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮಹೇಶ್ ಹಾಗೂ ಶೇಖರ್ ಅವರು ಗಾಯಗೊಂಡಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಸಾವಿನಲ್ಲೂ ಸಾರ್ಥಕತೆ

ಡಿವೈಡರ್‌ಗೆ ಕಾರು ಡಿಕ್ಕಿಯಾಗಿ ಮೃತಪಟ್ಟ ಯುವಕನ ನೇತ್ರದಾನ ಮಾಡುವ ಮೂಲಕ ಪೋಷಕರು ಸಾವಿನಲ್ಲೂ ಸಾರ್ಥಕತೆ ಮೆರೆದಿದ್ದಾರೆ.

ಮೈಸೂರು ಜಿಲ್ಲೆ ಪಿರಿಯಪಟ್ಟಣದ ರಂಜು (24) ಮೃತರು. ಅರಸಿಕಟ್ಟೆ ಅಮ್ಮನ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ವಾಪಾಸ್ ಹೋಗುತ್ತಿದ್ದಾಗ ಹೊಸಹಳ್ಳಿ ಗೇಟ್ ಬಳಿ ಡಿವೈಡರ್‌ಗೆ ಕಾರು ಡಿಕ್ಕಿಯಾಗಿದೆ. ಬಲವಾದ ಏಟು ಬಿದ್ದ ಹಿನ್ನೆಲೆ ಯುವಕ ಮೃತಪಟ್ಟಿದ್ದಾನೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜಾಗದ ವಿಚಾರಕ್ಕೆ ಮಚ್ಚಿನಿಂದ ಹಲ್ಲೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಮನೆ ಪಕ್ಕದ ಜಾಗದ ವಿಚಾರವಾಗಿ ಸಂಬಂಧಿಯೇ ಯುವಕನ ಮೇಲೆ ಮಚ್ಚಿನಿಂದ ಹಲ್ಲೆ ನಡೆಸಿರುವ ಘಟನೆ ತಾಲ್ಲೂಕಿನ ಕಾಲ್ಗನೆ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಚಿನ್ನಿ ಎಂಬುವವರ ಮಗ ಸತ್ಯ ಅವರ ಮೇಲೆ ಚಂದ್ರಶೇಖರ್ ಎಂಬಾತ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ.

ಎರಡು ಕುಟುಂಬಗಳ ಮನೆ ಅಕ್ಕಪಕ್ಕದಲ್ಲೇ ಇದ್ದು ಜಾಗದ ವಿಚಾರಕ್ಕೆ ವೈಮನಸ್ಸಿತ್ತು. ಶನಿವಾರ ಚಂದ್ರಶೇಖರನು ಚಿನ್ನಿ ಅವರು ಹಾಕಿದ್ದ ಬೇಲಿಯನ್ನು ಮಚ್ಚಿನಿಂದ ತೆರವು ಮಾಡುತ್ತಿದ್ದಾಗ ಅಲ್ಲಿಗೆ ಬಂದ ಸತ್ಯ ಪ್ರಶ್ನಿಸಿದ್ದಾರೆ.

ಅಷ್ಟಕ್ಕೆ ಆಕ್ರೋಶಗೊಂಡ ಚಂದ್ರಶೇಖರ್ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ಕೈಯಲ್ಲಿದ್ದ ಮಚ್ಚಿನಿಂದ ಬಲಗೈಗೆ ಹೊಡೆದಿದ್ದಾನೆ. ಗಲಾಟೆ ವಿಷಯ ನೋಡಿದ ಚಿನ್ನಿ ಅವರು ಜೋರಾಗಿ ಕಿರುಚಿದ್ದರಿಂದ ಅಕ್ಕಪಕ್ಕದ ಮನೆಯವರು ದೌಡಾಯಿಸಿ ಪರಿಸ್ಥಿತಿ ತಿಳಿಗೊಳಿಸಿದ್ದಾರೆ. ಗಂಭೀರ ಗಾಯಗೊಂಡಿರುವ ಸತ್ಯ ಅವರನ್ನು ಹಾಸನದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಆಲುವಳ್ಳಿ-ಕಡಗರವಳ್ಳಿ ಮಾರ್ಗದ ಬಸ್‌ಗೆ ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪಟ್ಟಣದಿಂದ ಆಲುವಳ್ಳಿ-ಕಡಗರವಳ್ಳಿ ಮಾರ್ಗಗಳ ನೂತನ ಬಸ್ ಸಂಚಾರಕ್ಕೆ ಶಾಸಕ ಸಿಮೆಂಟ್ ಮಂಜು ಸೋಮವಾರ ಚಾಲನೆ ನೀಡಿದರು.




ನಗರದ ನೂತನ ಬಸ್ ನಿಲ್ದಾಣದಲ್ಲಿ ಬಸ್‌ಗೆ ಪೂಜೆ ಸಲ್ಲಿಸಿ ಚಾಲನೆ ನೀಡಿ ಮಾತಾಡಿದರು. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಬಹುದಿನಗಳಿಂದ ಬೇಡಿಕೆಯಿದ್ದ ಮಾರ್ಗದಲ್ಲಿ ಬಸ್ ಸೇವೆ ಆರಂಭಿಸಲಾಗಿದೆ. ಗ್ರಾಮೀಣ ಪ್ರದೇಶಗಳಿಗೆ ರಸ್ತೆ ಸಾರಿಗೆ ಬಸ್ ಸೌಲಭ್ಯ ದೊರಕುವಂತಾಗಬೇಕು. ಹಲವು ವರ್ಷಗಳಿಂದ ಈ ಭಾಗಕ್ಕೆ ಸರ್ಕಾರಿ ಬಸ್‌ನ ಬೇಡಿಕೆ ಇತ್ತು. ಇಲ್ಲಿನ ವಿದ್ಯಾರ್ಥಿಗಳು, ರೈತರು, ಗ್ರಾಮಸ್ಥರು ಪಟ್ಟಣ, ನಗರಗಳಿಗೆ ತೆರಳಲು ಪರದಾಡುತ್ತಿದ್ದರು. ಈ ಬಗ್ಗೆ ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದರ ಫಲವಾಗಿ ಇಂದು ನೂತನ ಬಸ್ ಮಾರ್ಗಕ್ಕೆ ಚಾಲನೆ ನೀಡಲಾಗಿದ್ದು ಗ್ರಾಮಸ್ಥರು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದರು.

ಮುಂದಿನ ದಿನಗಳಲ್ಲಿ ಸಕಲೇಶಪುರ ಬಸ್ ನಿಲ್ದಾಣವನ್ನು ಮೇಲ್ದರ್ಜೆಗೇರಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ಕಳೆದ ಕೋವಿಡ್ ಸಂಧರ್ಭದಲ್ಲಿ ತಾಲೂಕಿನಲ್ಲಿ ಕೆಲವು ಗ್ರಾಮೀಣ ಪ್ರದೇಶಕ್ಕೆ ಬಸ್ ಮಾರ್ಗಗಳನ್ನು ಸ್ಥಗಿತಗೊಳಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳಿಂದ ಬಸ್ ಸೌಲಭ್ಯಕ್ಕೆ ಬೇಡಿಕೆ ಬಂದ ಕಾರಣ 11 ಹೊಸ ಅಶ್ವಮೇಧ ಬಸ್‌ಗಳು ಬಂದಿದ್ದು ಆಗತ್ಯಕ್ಕೆ ಅನುಗುಣವಾಗಿ ಮಾರ್ಗಗಳಿಗೆ ಬಸ್ ವ್ಯವಸ್ಥೆ ಮಾಡಲಾಗುವುದು. ಕ್ಷೇತ್ರದಿಂದ ವಿವಿಧೆಡೆ ಸಂಚರಿಸುವ ಹಳೆ ಬಸ್‌ಗಳನ್ನು ಬದಲಾವಣೆ ಮಾಡಲು ಹಾಗೂ ಹೊಸ ಬಸ್‌ಗಳನ್ನು ಬಿಡುವಂತೆ ಸಾರಿಗೆ ಸಚಿವರಿಗೆ ಮನವಿ ಸಲ್ಲಿಸಲಾಗಿದೆ. ಸಾರ್ವಜನಿಕರು ಕರ್ನಾಟಕ ರಾಜ್ಯ ಸಾರಿಗೆ ಬಸ್ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

# ಭಿಕ್ಷಾಟನೆ ನೆಪದಲ್ಲಿ ಬಂದು ದರೋಡೆ

ಸಕಲೇಶಪುರ: ಮಾಲೆ ಧರಿಸಿ ಭಿಕ್ಷೆ ಬೇಡುವ ನೆಪದಲ್ಲಿ ಬೈಕ್‌ನಲ್ಲಿ ಬಂದಿದ್ದ ಇಬ್ಬರು ಖದೀಮರು ಮನೆಗೆ ನುಗ್ಗಿ ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಹಾಗೂ ಹಣ ದೋಚಿ ಪರಾರಿಯಾಗಿರುವ ಘಟನೆ ತಾಲೂಕಿನ ವಡೂರು ಗ್ರಾಮದಲ್ಲಿ ನಡೆದಿದೆ.

ಶನಿವಾರ ಬೆಳಿಗ್ಗೆ ಸುಮಾರು 10 ಗಂಟೆ ಸಮಯದಲ್ಲಿ ಗ್ರಾಮಕ್ಕೆ ಬೈಕ್‌ನಲ್ಲಿ ಮಾಲೆ ಧರಿಸಿ ಬಂದಿದ್ದ ಇಬ್ಬರು ಖದೀಮರು ಗ್ರಾಮದ ಮನೆ ಮನೆಗೂ ತೆರಳಿ ಭಿಕ್ಷಾಟನೆ ಮಾಡಿದ್ದಾರೆ. ಬಳಿಕ ಗ್ರಾಮದ ರಂಜನ್ ಎಂಬುವರ ಮನೆಯಲ್ಲಿ ಯಾರೂ ಇಲ್ಲದೆ ಇರುವುದನ್ನು ಗಮನಿಸಿ ಮನೆಗೆ ನುಗ್ಗಿ ಬೀರುವಿನ ಲಾಕರ್ ಮುರಿದು ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಹಾಗೂ ನಗದು ದೋಚಿ ಪರಾರಿಯಾಗಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248